**18-01-2016** - ರಬ್ಬರ್ ಬೆಳೆಗಾರರ ಸಮಸ್ಯೆ ಕುರಿತು ಮಂಗಳೂರು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಲಾಯಿತು ಮತ್ತು ಮಳೆಯಾಶ್ರಿತ ಭತ್ತ ಮತ್ತು ಅಡಿಕೆ ಮಂಡಳಿ ಸ್ಥಾಪನೆ ಕುರಿತು ಜಿಲ್ಲಾಧಿಕಾರಿಗಳು, ಕೃಷಿ, ಅರಣ್ಯ ಮತ್ತು ತೋಟಗಾರಿಕೆ ಇಲಾಖೆಗಳ ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತು. ಸಭೆಯಲ್ಲಿ ಬೆಲೆ ಕುಸಿತದಿಂದ ಸಂಕಷ್ಟಕ್ಕೆ ಸಿಲುಕಿರುವ ರಾಜ್ಯದ ರಬ್ಬರ್ ಬೆಳೆಗಾರರಿಗೆ ಕೇರಳ ಮಾದರಿಯಲ್ಲಿ ಪರಿಹಾರ ಪ್ಯಾಕೇಜ್ ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ತೀರ್ಮಾನಿಸಲಾಯಿತು.

ಮಂಗಳವಾರ • ಜನವರಿ 19, 2016 ಪ್ರಜಾವಾಣಿ

ಮಲ್ಲಿಗೆ ಅಟ್ಟಿಗೆ ₹460

### ರಬ್ಬರ್ ಬೆಳೆಗಾರರ ಸಮಸ್ಯೆ ಕುರಿತು ಕೃಷಿ ಬೆಲೆ ಆಯೋಗದ ಸಭೆ

# ಕೇರಳ ಮಾದರಿ ಪ್ಯಾಕೇಜ್ ಶಿಫಾರಸು ಭರವಸೆ

ಪ್ರಜಾವಾಣಿ ವಾರ್ತೆ

ಮಂಗಳೂರು: ಬೆಲೆ ಕುಸಿತದಿಂದ ಸಂಕಷ್ಟಕ್ಕೆ ಸಿಲುಕಿರುವ ರಾಜ್ಯದ ರಬ್ಬರ್ ಬೆಳೆಗಾರರಿಗೆ ಕೇರಳ ಮಾದರಿಯಲ್ಲಿ ಪರಿಹಾರ ಪ್ಯಾಕೇಜ್ ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು ಎಂದು ರಾಜ್ಯ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ.ಟಿ.ಎನ್. ಪ್ರಕಾಶ್ ಕಮ್ಮರಡಿ ತಿಳಿಸಿದರು.

ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ರಬ್ಬರ್ ಬೆಳೆಗಾರರ ಸಮಸ್ಯೆ ಕುರಿತು ರಬ್ಬರ್ ಮಂಡಳಿ ಅಧಿಕಾರಿಗಳು, ಕೃಷಿ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹಾಗೂ ರಬ್ಬರ್ ಬೆಳೆಗಾರರ ಜೊತೆ ಸಭೆ ನಡೆಸಿದ ಅವರು, ಕೇಂದ್ರ ಸರ್ಕಾರದ ಅಧೀನದಲ್ಲಿರುವ ರಬ್ಬರ್ ಮಂಡಳಿಯ ಪುನಶ್ಚೇತನ, ರಬ್ಬರ್ ಬೆಳೆಯುವ ಪ್ರದೇಶದ ವಿಸ್ತೀರ್ಣ ಹೆಚ್ಚಳ ತಡೆಯುವುದು, ಕನಿಷ್ಠ ಬೆಂಬಲ ಬೆಲೆ ನಿಗದಿ ಮತ್ತು ಪರಿಹಾರ ಪ್ಯಾಕೇಜ್ ನೀಡುವ ಕುರಿತು ವಿಸ್ತೃತವಾಗಿ ಅಧ್ಯಯನ ನಡೆಸಿ ವರದಿ ಸಲ್ಲಿಸಲಾಗುವುದು ಎಂದರು.



ರಬ್ಬರ್ ಬೆಳೆಗಾರರ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಕುರಿತು ರಾಜ್ಯ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ.ಟಿ.ಎನ್.ಪ್ರಕಾಶ್ ಕಮ್ಮರಡಿ ಅವರು ಸೋಮವಾರ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಭೆ ನಡೆಸಿದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ. ಕೆಂಪೇಗೌಡ, ಜಿಲ್ಲಾಧಿಕಾರಿ ಎ.ಬಿ.ಇಬ್ರಾಹಿಂ ಮತ್ತು ಹೆಚ್ಚುವರಿ ಜಿಲ್ಲಾಧಿಕಾರಿ ಕುಮಾರ್ ಚಿತ್ರದಲ್ಲಿದ್ದಾರೆ. **ಪ್ರಜಾವಾಣಿ ಚಿತ್ರ**

ರಬ್ಬರ್ ಬೆಳೆಯು ಕೃಷಿ ಬೆಲೆ ಆಯೋಗದ ವ್ಯಾಪ್ತಿಯಲ್ಲಿಲ್ಲ. ಆದರೂ, ರಾಜ್ಯದ ಆರು ಜಿಲ್ಲೆಗಳಲ್ಲಿ ರಬ್ಬರ್ ಬೆಳೆಗಾರರು ಸಂಕಷ್ಟದಲ್ಲಿದ್ದಾರೆ. ಬೆಲೆ ಕುಸಿತದಿಂದ ಆರ್ಥಿಕ ನಷ್ಟಕ್ಕೆ ಸಿಲುಕಿರುವ ಅವರನ್ನು ಪಾರು ಮಾಡಲು ದಾರಿಗಳಿವೆಯೇ ಎಂಬುದನ್ನು ಹುಡುಕಲು ಆಯೋಗ ಮುಂದಾಗಿದೆ. ರಬ್ಬರ್ ಉತ್ಪಾದನಾ ವೆಚ್ಚ ಕಡಿತಗೊಳಿಸುವ ಸಾಧ್ಯತೆಗಳ ಕುರಿತು ಅಧ್ಯಯನ ನಡೆಸಬೇಕಿದೆ. ಮಿಶ್ರ ಬೆಳೆಗಳ ಮೂಲಕ ರೈತರ ವರಮಾನ ಹೆಚ್ಚಳದ ಬಗ್ಗೆಯೂ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು.

ಪ್ರಸಕ್ತ ವರ್ಷ ಪ್ರತಿ ಕೆ.ಜಿ. ರಬ್ಬರ್ ಉತ್ಪಾದನೆಗೆ ಕನಿಷ್ಠ ₹ 127 ವೆಚ್ಚವಾಗುತ್ತಿದೆ. ಆದರೆ, ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿ.ಗೆ ₹ 84 ದರವಿದೆ. ಇದರಿಂದ ಬೆಳೆಗಾರರು ಭಾರಿ ನಷ್ಟ ಅನುಭವಿಸುತ್ತಿದ್ದಾರೆ. ಕೇರಳದಲ್ಲಿ ಪ್ರತಿ ಕೆ.ಜಿ. ರಬ್ಬರ್‌ಗೆ ₹ 150 ಬೆಂಬಲ ಬೆಲೆ ಘೋಷಿಸಿದ್ದು, ಮಾರುಕಟ್ಟೆ ದರ ಕುಸಿದಾಗ ₹ 150ಕ್ಕೆ ಹೊಂದಿಕೆಯಾಗುವಂತೆ ಸಹಾಯಧನ ನೀಡಲಾಗುತ್ತಿದೆ. ಅದೇ ಮಾದರಿಯಲ್ಲಿ ರಾಜ್ಯದಲ್ಲೂ ಪರಿಹಾರ ಪ್ಯಾಕೇಜ್ ರೂಪಿಸಬೇಕು ಎಂದು ರಾಜ್ಯ ರಬ್ಬರ್ ಬೆಳೆಗಾರರ ಸಂಘದ ಪ್ರತಿನಿಧಿಗಳು ಆಗ್ರಹಿಸಿದರು.

ರಬ್ಬರ್ ಬೆಳೆಗಾರರಿಗೆ ಕೇರಳದಲ್ಲಿ ನೀಡುತ್ತಿರುವ ಪರಿಹಾರ ಪ್ಯಾಕೇಜ್ ಮತ್ತು ಅಲ್ಲಿನ ಬೆಳೆಗಾರರ ಸ್ಥಿತಿಗತಿ ಕುರಿತು ಅಧ್ಯಯನ ನಡೆಸಿ ವರದಿ ಸಲ್ಲಿಸಲು ಕೃಷಿ ಇಲಾಖೆಯು ಸಮಿತಿ ನೇಮಕ ಮಾಡಿದೆ. ರಬ್ಬರ್ ಬೆಳೆಗಾರರಿಗೆ ನೆರವಿನ ಪ್ಯಾಕೇಜ್ ಘೋಷಿಸಬೇಕೆಂಬ ಮನವಿ ಆಧರಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ಸಭೆಗೆ ತಿಳಿಸಿದರು.

**ಸುಂಕ ಹೆಚ್ಚಳಕ್ಕೆ ಆಗ್ರಹ:** ಕಚ್ಚಾ ನೈಸರ್ಗಿಕ ರಬ್ಬರ್‌ಗೆ ಶೇಕಡ 70ರಷ್ಟು ಆಮದು ಸುಂಕವಿದೆ. ಆದರೆ, ಬಳಕೆಗೆ ಸಿದ್ಧವಾದ ಉತ್ಪನ್ನದ ಮೇಲಿನ ಆಮದು ಸುಂಕ ಶೇ 25ರಷ್ಟಿದೆ. ದೇಶದಲ್ಲಿ 50,000 ಟನ್ ರಬ್ಬರ್ ಕೊರತೆ ಇದೆ. ಆದರೆ, 4.5 ಲಕ್ಷ ಟನ್ ಆಮದಿಗೆ ಅನುಮತಿ ನೀಡಲಾಗಿದೆ. ಇದರಿಂದ ಬೆಲೆ ಕುಸಿತವಾಗಿದೆ. ಬಳಕೆಗೆ ಸಿದ್ಧವಾದ ಉತ್ಪನ್ನದ ಮೇಲಿನ ಸೀಮಾ ಸುಂಕವನ್ನೂ ಶೇ 70ರಷ್ಟಕ್ಕೆ ಹೆಚ್ಚಿಸಬೇಕು. ಆಮದು ಪ್ರಮಾಣದ ಮೇಲೆ ಮಿತಿ ಹೇರಬೇಕು ಎಂದು ರೈತರು ಒತ್ತಾಯಿಸಿದರು.

ಆಮದು ಸುಂಕ ಹೆಚ್ಚಳ ಸಾಧ್ಯತೆ ಕುರಿತು ಚರ್ಚೆ ನಡೆಸಲು ಆಯೋಗದ ಅಧ್ಯಕ್ಷರು ಮುಂದಾದರು. ಆದರೆ, ಇದು ಕೇಂದ್ರ ಸರ್ಕಾರದ ನೀತಿಗಳ ವ್ಯಾಪ್ತಿಗೆ ಬರುತ್ತದೆ ಎಂದು ರಬ್ಬರ್ ಮಂಡಳಿಯ ಉಪ ರಬ್ಬರ್ ಉತ್ಪಾದನಾ ಕಮಿಷನರ್ ಡಾ.ಬಾಲು, ಚರ್ಚೆಗೆ ನಿರಾಕರಿಸಿದರು. ಆಮದು ಸುಂಕ ಹೆಚ್ಚಳ ಸಾಧ್ಯತೆ ಕುರಿತು ಪ್ರಕಾಶ್ ಕಮ್ಮರಡಿ ಮತ್ತು ಬಾಲು ಅವರ ನಡುವೆ ಕೆಲಕಾಲ ವಾಗ್ವಾದವೂ ನಡೆಯಿತು.

ಜಿಲ್ಲಾಧಿಕಾರಿ ಎ.ಬಿ.ಇಬ್ರಾಹಿಂ, ಹೆಚ್ಚುವರಿ ಜಿಲ್ಲಾಧಿಕಾರಿ ಕುಮಾರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಕೆಂಪೇಗೌಡ ಸಭೆಯಲ್ಲಿ ಹಾಜರಿದ್ದರು.